ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/282ಸಿ/ಇಪಿಆರ್‌ಎಸ್/2022/ಭಾಗ-01/ಕಾನಿವ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:17-01-2023.

ಇವರಿಗೆ,

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ , ಮಂಗಳೂರು , ಧಾರವಾಡ ಮತ್ತು ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಮಾನ್ಯರೆ,

ವಿಷಯ:- 2022ನೇ ಶೈಕ್ಷಣಿಕ ಸಾಲಿನ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ನೀಡುವ ಬಗ್ಗೆ.

ಉಲ್ಲೇಖ:- 1.ಈ ಕಛೇರಿ ಸಮ ಸಂಖ್ಯೆ ಪತ್ರದ ದಿನಾಂಕ:11-07-2023.
2. ದಿನಾಂಕ:13.01.2023ರ ಅಧಿಸೂಚನೆ ಸಂಖ್ಯೆ:ಸಿಆಸುಇ 12 ಸೇನಿಸಿ 2022 ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತುಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-2).

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ 01ರಲ್ಲಿ ಡಿಸೆಂಬರ್ 31ಕ್ಕೆ ಅಂತ್ಯಗೊಳ್ಳುವಂತೆ ಪ್ರತಿ 12 ತಿಂಗಳಿಗೊಮ್ಮೆ ಅಧಿಕಾರಿ ಮತ್ತು ಸಿಬ್ಬಂದಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಪಟ್ಟಿಯನ್ನು ನೀಡಬೇಕೆಂದು ತಿಳಿಸಲಾಗಿತ್ತು. ಆದರೆ, ಉಲ್ಲೇಖ 02ರ ಸರ್ಕಾರದ ಅಧಿಸೂಚನೆಯಂತೆ ಮಾರ್ಚ್ 31ಕ್ಕೆ ಅಂತ್ಯಗೊಳ್ಳುವಂತೆ ಆಸ್ತಿ ಮತ್ತು ಹೊಣೆಗಾರಿಕೆಗಳ ಪಟ್ಟಿಯನ್ನು ನೀಡಬೇಕೆಂದು ಪ್ರತಿಸ್ಥಾಪಿಸಿರುವುದರಿಂದ ಮಾರ್ಚ್ 31ರ ನಂತರ ನೀಡಬೇಕೆಂದು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರ ಕಛೇರಿಗೆ

ತಮ್ಮ ವಿಶ್ವಾಸಿ

ಕಾಲೇಜು ಶಿಕ್ಷಣ ನಿರ್ದೇಶಕರು

ಅಡಕ: ಸರ್ಕಾರದ ಅಧಿಸೂಚನೆ

ಪ್ರತಿಯನ್ನು

1 ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರುಗಳ, ಅಗತ್ಯ ಕ್ರಮಕ್ಕಾಗಿ.
2 ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3 ರಕ್ಷಕ ಕಡತ.
4 ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 12 ಸೇನಿಸಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:13.01.2023

**ಅಧಿಸೂಚನೆ**

ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 16.12.2022ರ ಅಧಿಸೂಚನೆ ಸಂಖ್ಯೆ: ಸಿಆಸುಇ 12 ಸೇನಿಸಿ 2022ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯ ಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 19.12.2022ರ ಕರ್ನಾಟಕ ರಾಜ್ಯ ಪತ್ರಿಕೆಯ ಭಾಗ-IVA (ಸಂಖ್ಯೆ:255)ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978(1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯ ಪತ್ರವನ್ನು ದಿನಾಂಕ:19.12.2022ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡು ನಿಯಮಗಳ ಬಗ್ಗೆ ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳು ಸ್ವೀಕೃತವಾಗದಿರುವುದರಿಂದ;

ಈಗ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 8ನೇ ಪ್ರಕರಣದೊಂದಿಗೆ ಓದಿಕೊಂಡು 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಕೆಳಕಂಡಂತೆ ನಿಯಮಗಳನ್ನು ರಚಿಸುತ್ತದೆ ಎಂದರೆ:-

**ನಿಯಮಗಳು**

1. **ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) (ತಿದ್ದುಪಡಿ) ನಿಯಮಗಳು, 2023 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 24 ಕ್ಕೆ ತಿದ್ದುಪಡಿ.-** ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021ರ ನಿಯಮ 24ರ ಉಪನಿಯಮ (2)ರಲ್ಲಿನ "ಡಿಸೆಂಬರ್ 31ಕ್ಕೆ" ಎಂಬ ಪದ ಮತ್ತು ಅಂಕಿಗಳ ಬದಲಾಗಿ "ಮಾರ್ಚ್ 31ಕ್ಕೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರತ್ನ ವಿ. ಪಾಟೀಲ್) 13/1/2023
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

---2

ಇವರಿಗೆ:

1. ಮಹಾಲೇಖಪಾಲರು, (ಜಿ&ಎಸ್ಎಸ್ಎ) (ಇ&ಆರ್ಎಸ್-ಎ) (ಎ&ಇ) ಕರ್ನಾಟಕ, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
6. ಮುಖ್ಯಮಂತ್ರಿಯವರ ಕಾರ್ಯದರ್ಶಿಯವರು
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6ನೇ ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು-560009
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣ, ಬಹುಮಹಡಿ ಕಟ್ಟಡ, ಬೆಂಗಳೂರ - 560001
15. ಎಲ್ಲಾ ಇಲಾಖಾ ಮುಖ್ಯಸ್ಥರು
16. ಎಲ್ಲಾ ಪ್ರಾದೇಶಿಕ ಆಯುಕ್ತರು
17. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
18. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು - 560001
19. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖಾಧಿಕಾರಿಗಳು
21. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ (ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ:656/2022, ದಿನಾಂಕ:08.12.2022)
22. ಶಾಖಾ ರಕ್ಷಾ ಕಡತ/ಅಧಿಕ ಪ್ರತಿಗಳು
(*ಮುಖ ಪತ್ರದೊಂದಿಗೆ)

ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★